ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : 23/1/20

## ಎಂಜಿಆರ್ ಹುಟ್ಟುಹಬ್ಬ ಕಾರ್ಯಕ್ರಮ ವೇಳೆ ನಡೆದ ಘಟನೆ

# ಲಘು ಸ್ಫೋಟದಿಂದ ಶಾಸಕ ಹ್ಯಾರಿಸ್ ಸೇರಿ ನಾಲ್ವರಿಗೆ ಗಾಯ

■ **ವಿಕ ಸುದ್ದಿಲೋಕ** ಬೆಂಗಳೂರು

ಶಾಂತಿನಗರದಲ್ಲಿ ಬುಧವಾರ ರಾತ್ರಿ 8.30ರ ಸುಮಾರಿಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಜಿ.ಆರ್. ಹುಟ್ಟುಹಬ್ಬ ಕಾರ್ಯಕ್ರಮದ ವೇಳೆ ಲಘು ಸ್ಫೋಟ ಸಂಭವಿಸಿ ಶಾಂತಿನಗರ ಶಾಸಕ ಎನ್.ಎ ಹ್ಯಾರಿಸ್ ಸೇರಿದಂತೆ ನಾಲ್ವರು ಜನರಿಗೆ ಸುಟ್ಟ ಗಾಯಗಳಾಗಿವೆ. ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಯಾವುದೇ ಪ್ರಾಣಾಪಾಯವಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಘಟನಾ ಸ್ಥಳಕ್ಕೆ ವಿವೇಕನಗರ, ಅಶೋಕನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಫೋಟಗೊಂಡ ವಸ್ತು ಯಾವುದು ಎನ್ನುವ ಬಗ್ಗೆ ವಿಧಿವಿಜ್ಞಾನ ಪ್ರಯೋಗಾಲಯ ತಜ್ಞರನ್ನು ಕರೆಸಿ ಪರಿಶೀಲನೆ ನಡೆಸಲಾಗುತ್ತದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದರು.



**ಪಟಾಕಿಯಿಂದ ಸ್ಫೋಟ?**

ಕಾರ್ಯಕ್ರಮದಲ್ಲಿ ಪಟಾಕಿಗಳನ್ನು ಸಿಡಿಸಲಾಗುತ್ತಿತ್ತು. ಈ ವೇಳೆ ಒಂದು ಪಟಾಕಿ ಶಾಸಕರ ಕಾಲಿನ ಬಳಿಯೇ ಬಿದ್ದು ಸ್ಫೋಟಗೊಂಡಿರಬಹುದು ಎಂದೂ ಶಂಕಿಸಲಾಗಿದೆ.

ಘಟನೆ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಶಾಸಕ ಹ್ಯಾರಿಸ್ ಪುತ್ರ ಮೊಹಮ್ಮದ್ ನಲಪಾಡ್, "ಕಾರ್ಯಕ್ರಮದಲ್ಲಿ ಶಾಸಕರಿಗಾಗಿ ವಿಶೇಷ ಚೇರ್ ವ್ಯವಸ್ಥೆ ಮಾಡಲಾಗಿತ್ತು. ಆದರೆ, ಅವರು ಅದರ ಪಕ್ಕದಲ್ಲಿದ್ದ ಮತ್ತೊಂದು ಚೇರನಲ್ಲಿ ಕುಳಿತಿದ್ದರು. ಸ್ವಲ್ಪ ಹೊತ್ತಿನ ಬಳಿಕ ಯಾವುದೋ ವಸ್ತುವೊಂದು ಅವರ ಬಳಿ ಬಿದ್ದು ಸ್ಫೋಟಗೊಂಡಿತು. ಕಾಲಿನ ಬಳಿಯೇ ಸ್ಫೋಟಗೊಂಡ ಕಾರಣ ಕಾಲಿನ ಭಾಗಕ್ಕೆ ಸುಟ್ಟ ಗಾಯಗಳಾಗಿವೆ" ಎಂದು ಹೇಳಿದರು.

"ನಮ್ಮ ತಂದೆಯನ್ನು ದೇವರೇ ಕಾಪಾಡಿದ್ದಾರೆ. ಈ ಕೃತ್ಯ ಯಾರು ಮಾಡಿದ್ದಾರೆ ಮತ್ತು ಏಕೆ ಮಾಡಿದ್ದಾರೆಂದು ಗೊತ್ತಿಲ್ಲ. ಉದ್ದೇಶಪೂರ್ವಕವಾಗಿಯೇ ಮಾಡಿರಬೇಕು. ಪಟಾಕಿಯಂತೂ ಅಲ್ಲ, ಏಕೆಂದರೆ ಅದು ಸ್ವಲ್ಪ ದೊಡ್ಡದಾಗಿಯೇ ಇತ್ತು. ತಂದೆಗೆ ಚಿಕಿತ್ಸೆ ಕೊಟ್ಟು ಎರಡು ತಾಸು ನಿಗಾ ಘಟಕದಲ್ಲಿ ಇರಿಸಲಾಗಿದೆ" ಎಂದು ನಲಪಾಡ್ ಹೇಳಿದರು.